ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ

ವಿಷಯ:- ಕೋವಿಡ್-19 ಹಿನ್ನಲೆಯಲ್ಲಿ ತೆರವು-5ರ ಮಾರ್ಗಸೂಚಿಗಳನ್ನು ಅನುಸರಿಸಿ ಹೊಸ ವರ್ಷ ಆಚರಣೆ ಸಂಬಂಧ ಡಿ.ಜೆ.ಸೌಂಡ್ಸ್, ಡ್ಯಾನ್ಸ್ ಕಾರ್ಯಕ್ರಮಗಳನ್ನು ನಿಷೇಧಿಸಿರುವ ಬಗ್ಗೆ.

ಉಲ್ಲೇಖ:- ಮಾನ್ಯ ಮುಖ್ಯ ಕಾರ್ಯದರ್ಶಿಗಳು ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು, ಬೆಂಗಳೂರು ಇವರ ಆದೇಶ ಸಂಖ್ಯೆ ಕಂಇ 465 ಟಿಎನ್ಆರ್ 2020, ದಿನಾಂಕ:17-12-2020.

----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೋವಿಡ್-19 ನಿಯಂತ್ರಿಸುವ ಸಂಬಂಧ ಸರ್ಕಾರದ ಆದೇಶಗಳನ್ವಯ ಜಿಲ್ಲೆಯಲ್ಲಿ ಹೊಸ ಮಾರ್ಗಸೂಚಿಗಳು ದಿನಾಂಕ:25-11-2020 ರಿಂದ ದಿನಾಂಕ:31-12-2020ರವರೆಗೆ ಜಾರಿಯಲ್ಲಿರುತ್ತವೆ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಹೊಸ ವರ್ಷದ ಸಂಭ್ರಮಾಚರಣೆಯನ್ನು ಸರಳವಾಗಿ ಆಚರಿಸುವ ಅವಶ್ಯಕತೆ ಇರುವುದರಿಂದ ಸಾಮಾಜಿಕ ಅಂತರವಿಲ್ಲದೇ ಹೆಚ್ಚಿನ ಜನರು ಸೇರುವಂತೆ ಕೂಟಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಹೆಚ್ಚು ಜನಸಂಖ್ಯೆಯುಳ್ಳ ವಸತಿ ಸಮ್ಮುಚ್ಚಯಗಳಲ್ಲಿ ಹಾಗೂ ಜನ ಸೇರತಕ್ಕಂತಹ ಸ್ಥಳಗಳಲ್ಲಿ ಆಯೋಜಿಸುವುದನ್ನು ನಿಷೇಧಿಸಲಾಗಿದ್ದು, ಆಚರಣೆ ಸಂದರ್ಭದಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ಹಚ್ಚಲು ಆದೇಶ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ ಕಂಇ 465 ಟಿಎನ್ಆರ್ 2020, ದಿನಾಂಕ:6-11-2020 ಮತ್ತು ದಿನಾಂಕ:13-11-2020ರಲ್ಲಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿರುತ್ತದೆ.

ಪ್ರಸ್ತುತ ಜಿಲ್ಲೆಯಲ್ಲಿ ಕೋವಿಡ್-19 ಸಾಂಕ್ರಾಮಿಕ ಸೋಂಕನ್ನು ನಿಯಂತ್ರಿಸಲು ಜಿಲ್ಲಾಡಳಿತವು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಗೊಳಿಸಲು ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅವಶ್ಯಕತೆ ಇರುತ್ತದೆ. ಇಂತಹ ಪರಿಸ್ಥಿತಿಯನ್ನು ಸಾರ್ವಜನಿಕರ ಸುರಕ್ಷತೆ ಮತ್ತು ಆರೋಗ್ಯದ ಹಿತದೃಷ್ಟಿಯಿಂದ ಹೊಸ ವರ್ಷದ ಸಂಭ್ರಮಾಚರಣೆ ಮಾಡಲು ಹೋಟೆಲ್‌ಗಳು/ರೆಸಾರ್ಟ್ /ಮಾಲ್‌ಗಳು/ಪಬ್/ರೆಸ್ಟೋರೆಂಟ್‌ಗಳು ಹಾಗೂ ಅಂತಹ ಸ್ಥಳ/ಪ್ರದೇಶಗಳಲ್ಲಿ ಶೇ.50 ರಷ್ಟು ಜನರು ಮಾತ್ರ ಸೇರುವ ಷರತ್ತಿಗೊಳಪಟ್ಟು ಅನುಮತಿಯನ್ನು ನೀಡಿರುತ್ತದೆ. ಆದರೆ ಹೊಸ ವರ್ಷದ ಆಚರಣೆ ಸಮಯದಲ್ಲಿ ರಾತ್ರಿ ವೇಳೆ ಡಿ.ಜೆ ಸೌಂಡ್ಸ್, ಡ್ಯಾನ್ಸ್ ಕಾರ್ಯಕ್ರಮಗಳನ್ನು ಹೋಟೆಲ್‌ಗಳು/ರೆಸಾರ್ಟ್/ಲಾಡ್ಜ್/ಪಬ್/ರೆಸ್ಟೋರೆಂಟ್‌ಗಳಲ್ಲಿ/ಪ್ರೇಕ್ಷಣಿಯ ಸ್ಥಳಗಳಲ್ಲಿ ನಡೆಸುವುದರಿಂದ ಜನದಟ್ಟಣೆಯಾಗಿ ಕೋವಿಡ್-19ರ ಸೋಂಕು ಹರಡುವ ಸಾಧ್ಯತೆ ಇರುವ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶ.

:: ಆದೇಶ ::

**ಸಂಖ್ಯೆ: ವಿಪತ್ತು ನಿರ್ವಹಣೆ:ಕೋವಿಡ್-19:ಸಿಆರ್:1/2019-20,** **ದಿನಾಂಕ:29-12-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಶ್ರೀಮತಿ ಕವಿತ.ಎಸ್.ಮನ್ನಿಕೇರಿ, ಭಾ.ಆ.ಸೇ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ ಆದ ನಾನು ಸಾರ್ವಜನಕರಿ ಸುರಕ್ಷತೆ ಮತ್ತು ಆರೋಗ್ಯದ ಹಿತದೃಷ್ಟಿಯಿಂದ ಕೋವಿಡ್-19 ವೈರಸ್ ಹರಡದಂತೆ ಮುಂಜಾಗ್ರತಾ ಕ್ರಮವಾಗಿ The Karnataka Epidemic Diseases COVID-19 Regulations, 2020, Section 12(iii) ರಂತೆ ಹಾಗೂ ಸಿ.ಆರ್.ಪಿ.ಸಿ 1973ರ ಕಲಂ 144(3)ರ ರೀತ್ಯಾ ಪ್ರದತ್ತವಾಗಿರುವ ಅಧಿಕಾರವನ್ನು ಬಳಸಿಕೊಂಡು ಹೊಸ ವರ್ಷದ ಸಂಭ್ರಮಾಚರಣೆ ಸಂಬಂಧ ಜಿಲ್ಲಾ ವ್ಯಾಪ್ತಿಯಲ್ಲಿರುವ ಎಲ್ಲಾ ಅರಣ್ಯ ಮತ್ತು ಪ್ರವಾಸೋದ್ಯಮ ಇಲಾಖೆಯ ವಸತಿ ಗೃಹಗಳು/ ಹೋಟೆಲ್‌ಗಳು/ ರೆಸಾರ್ಟ್/ಲಾಡ್ಜ್/ಪಬ್/ರೆಸ್ಟೋರೆಂಟ್‌ಗಳು/ಪ್ರೇಕ್ಷಣೀಯ ಸ್ಥಳಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹೊಸ ವರ್ಷಾಚರಣೆಯ ಸಂದರ್ಭದಲ್ಲಿ ಎಲ್ಲಾ ರೀತಿಯ ಡಿ.ಜೆ ಸೌಂಡ್ಸ್, ಡ್ಯಾನ್ಸ್ ಕಾರ್ಯಕ್ರಮಗಳನ್ನು ಹಾಗೂ ಪಾರ್ಟಿಗಳನ್ನು ನಿಷೇಧಿಸಿ ಆದೇಶಿಸಿದೆ.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

ಪ್ರತಿಯನ್ನು:-

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
2) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ
3) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ
4) ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಸಾಮಾಜಿಕ/ಪ್ರಾದೇಶಿಕ ಅರಣ್ಯ ವಿಭಾಗ, ಚಿತ್ರದುರ್ಗ
5) ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ
6) ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು, ಚಿತ್ರದುರ್ಗ
7) ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು
8) ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು
9) ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಚಿತ್ರದುರ್ಗ
10) ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳು
11) ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿತ್ರದುರ್ಗ ಇವರಿಗೆ ಮಾಹಿತಿ ಹಾಗೂ ಕ್ರಮಕ್ಕಾಗಿ.

ಕರ್ನಾಟಕ ಸರ್ಕಾರ

**ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ**

ವಿಷಯ:– ಕೋವಿಡ್–19 ಹಿನ್ನಲೆಯಲ್ಲಿ ತೆರವು–5ರ ಮಾರ್ಗಸೂಚಿಗಳನ್ನು ಅನುಸರಿಸಿ ಹೊಸ ವರ್ಷ ಆಚರಣೆ ಸಂಬಂಧ ಆದೇಶ ಹೊರಡಿಸುವ ಬಗ್ಗೆ

ಉಲ್ಲೇಖ:– ಮಾನ್ಯ ಮುಖ್ಯ ಕಾರ್ಯದರ್ಶಿಗಳು ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು, ಬೆಂಗಳೂರು ಇವರ ಆದೇಶ ಸಂಖ್ಯೆ ಕಂಇ 465 ಟಿಎನ್ಆರ್ 2020, ದಿನಾಂಕ:17–12–2020.

----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೋವಿಡ್–19 ನಿಯಂತ್ರಿಸುವ ಸಂಬಂಧ ಸರ್ಕಾರದ ಆದೇಶಗಳನ್ವಯ ಜಿಲ್ಲೆಯಲ್ಲಿ ಹೊಸ ಮಾರ್ಗಸೂಚಿಗಳು ದಿನಾಂಕ:25–11–2020 ರಿಂದ ದಿನಾಂಕ:31–12–2020ರವರೆಗೆ ಜಾರಿಯಲ್ಲಿರುತ್ತವೆ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಹೊಸ ವರ್ಷದ ಸಂಭ್ರಮಾಚರಣೆಯನ್ನು ಸರಳವಾಗಿ ಆಚರಿಸುವ ಅವಶ್ಯಕತೆ ಇರುವುದರಿಂದ ಸಾಮಾಜಿಕ ಅಂತರವಿಲ್ಲದೇ ಹೆಚ್ಚಿನ ಜನರು ಸೇರುವಂತೆ ಕೂಟಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಹೆಚ್ಚು ಜನಸಂಖ್ಯೆಯುಳ್ಳ ವಸತಿ ಸಮ್ಮುಚ್ಛಯಗಳಲ್ಲಿ ಹಾಗೂ ಜನ ಸೇರತಕ್ಕಂತಹ ಸ್ಥಳಗಳಲ್ಲಿ ಆಯೋಜಿಸುವುದನ್ನು ನಿಷೇಧಿಸಲಾಗಿದ್ದು, ಆಚರಣೆ ಸಂದರ್ಭದಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ಹಚ್ಚಲು ಆದೇಶ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ ಕಂಇ 465 ಟಿಎನ್ಆರ್ 2020, ದಿನಾಂಕ:6–11–2020 ಮತ್ತು ದಿನಾಂಕ:13–11–2020ರಲ್ಲಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿರುತ್ತದೆ.

ಪ್ರಸ್ತುತ ಜಿಲ್ಲೆಯಲ್ಲಿ ಕೋವಿಡ್–19 ಸಾಂಕ್ರಾಮಿಕ ಸೋಂಕನ್ನು ನಿಯಂತ್ರಿಸಲು ಜಿಲ್ಲಾಡಳಿತವು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಹಾಗೂ ಹೊಸ ವರ್ಷದ ಸಂಭ್ರಮಾಚರಣೆ ಮಾಡಲು ಹೋಟೆಲ್‌ಗಳು/ರೆಸಾರ್ಟ್/ಮಾಲ್‌ಗಳು/ಪಬ್/ರೆಸ್ಟೋರೆಂಟ್‌ಗಳು ಹಾಗೂ ಅಂತಹ ಸ್ಥಳ/ಪ್ರದೇಶಗಳಲ್ಲಿ ಶೇ.50 ರಷ್ಟು ಜನರು ಮಾತ್ರ ಸೇರುವ ಷರತ್ತಿಗೊಳಪಟ್ಟು ಅನುಮತಿಯನ್ನು ನೀಡಿರುತ್ತದೆ. ಮುಂದುವರೆದು ಜಿಲ್ಲಾ ವ್ಯಾಪ್ತಿಯಲ್ಲಿರುವ ಎಲ್ಲಾ ಅರಣ್ಯ ಮತ್ತು ಪ್ರವಾಸೋದ್ಯಮ ಇಲಾಖೆಯ ವಸತಿ ಗೃಹಗಳು/ ಹೋಟೆಲ್‌ಗಳು /ರೆಸಾರ್ಟ್/ಲಾಡ್ಜ್/ಪಬ್/ರೆಸ್ಟೋರೆಂಟ್‌ಗಳು ಶೇ.50ಕ್ಕಿಂತ ಹೆಚ್ಚು ಬುಕ್ ಆಗಿರುವುದು ಜಿಲ್ಲಾಡಳಿತದ ಗಮನಕ್ಕೆ ಬಂದಿರುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರನ್ನು ವಾಸ್ತವ್ಯ ಹೂಡಲು ಅನುಮತಿಸಿ ಜನದಟ್ಟಣೆಯಿಂದ ಕೋವಿಡ್–19ರ ಸೋಂಕು ಹರಡುವುದನ್ನು ತಡೆಗಟ್ಟುವ ಹಿನ್ನಲೆಯಲ್ಲಿ ಈ ಕೆಳಕಂಡ ಆದೇಶ.

**:: ಆದೇಶ ::**

**ಸಂಖ್ಯೆ: ವಿಪತ್ತು ನಿರ್ವಹಣೆ:ಕೋವಿಡ್–19:ಸಿಆರ್:1/2019–20,** **ದಿನಾಂಕ:29–12–2020.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಹೊಸ ವರ್ಷದ ಸಂಭ್ರಮಾಚರಣೆ ಸಂಬಂಧ ಜಿಲ್ಲಾ ವ್ಯಾಪ್ತಿಯಲ್ಲಿರುವ ಎಲ್ಲಾ ಅರಣ್ಯ ಮತ್ತು ಪ್ರವಾಸೋದ್ಯಮ ಇಲಾಖೆಯ ವಸತಿ ಗೃಹಗಳು/ ಹೋಟೆಲ್‌ಗಳು/ ರೆಸಾರ್ಟ್/ಲಾಡ್ಜ್/ಪಬ್/ರೆಸ್ಟೋರೆಂಟ್‌ಗಳಲ್ಲಿ ಶೇ.50 ರಷ್ಟು ಜನರು ಮಾತ್ರ ಸೇರುವ ಷರತ್ತಿಗೊಳಪಟ್ಟು ನೀಡಿರುವ ಅನುಮತಿಯನ್ನು ಉಲ್ಲಂಘಿಸಿ ಶೇ.50ಕ್ಕಿಂತ ಹೆಚ್ಚು ಜನರಿಗೆ ಅವಕಾಶ ಮಾಡಿ ಕೋವಿಡ್–19ರ ಸೋಂಕು ನಿಯಂತ್ರಣ ಕ್ರಮಗಳನ್ನು ಉಲ್ಲಂಘಿಸಿದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005ರ ಸೆಕ್ಷನ್ 58ರಡಿ ಮತ್ತು ಭಾರತೀಯ ದಂಡ ಸಂಹಿತೆ ಸೆಕ್ಷನ್ 188ರ ಅಡಿಯಲ್ಲಿ ಶಿಸ್ತಿನ/ಕಾನೂನು ಕ್ರಮ ಮತ್ತು ಅನ್ವಯವಾಗಬಹುದಾದ ಇತರೆ ಕಾನೂನು ಉಪಬಂಧಗಳ ಮೇರೆಗೆ ಕ್ರಮ ಜರುಗಿಸಲಾಗುವುದು. ಹಾಗೂ ಎಲ್ಲಾ ಹೋಟೆಲ್/ರೆಸಾರ್ಟ್/ಲಾಡ್ಜ್/ಪಬ್/ರೆಸ್ಟೋರೆಂಟ್‌ಗಳನ್ನು ತಹಶೀಲ್ದಾರ್, ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯಿತಿ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಸಮನ್ವಯ ಸಾಧಿಸಿ ತಮ್ಮ ತಾಲ್ಲೂಕು ವ್ಯಾಪ್ತಿಯಲ್ಲಿ ರ್‍ಯಾಂಡಂ ಆಗಿ ಖುದ್ದು ಪರಿಶೀಲಿಸಿ ಶೇ.50 ಕ್ಕಿಂತ ಹೆಚ್ಚು ಬುಕ್ಕಿಂಗ್ ಮಾಡಿದಲ್ಲಿ ಅಂತಹ ಬುಕ್ಕಿಂಗ್‌ಗಳನ್ನು ರದ್ದುಪಡಿಸಲು ಕ್ರಮವಹಿಸುವಂತೆ ಆದೇಶಿಸಿದೆ.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

**ಪ್ರತಿಯನ್ನು:–**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
2) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ
3) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ
4) ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಸಾಮಾಜಿಕ/ಪ್ರಾದೇಶಿಕ ಅರಣ್ಯ ವಿಭಾಗ, ಚಿತ್ರದುರ್ಗ
5) ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ
6) ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು, ಚಿತ್ರದುರ್ಗ
7) ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು
8) ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು
9) ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಚಿತ್ರದುರ್ಗ
10) ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳು
11) ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿತ್ರದುರ್ಗ ಇವರಿಗೆ ಮಾಹಿತಿ ಹಾಗೂ ಕ್ರಮಕ್ಕಾಗಿ.